# ಅಂಗವಿಕಲತೆ ನಿವಾರಣಾ ವೈದ್ಯಕೀಯ ಪರಿಹಾರ ನಿಧಿ

(ಸರ್ಕಾರಿ ಆದೇಶ ಸಂ:ಮಮಅ 341 ಪಿಹೆಚ್‌ಪಿ–2000 ದಿನಾಂಕ 7-8-2000 ,
ಮಮಇ 199 ಪಿಹೆಚ್‌ಪಿ 2008(5) ದಿನಾಂಕ:15/09/2008 ಮತ್ತು
ಮಮಇ 114 ಪಿಎಚ್‌ಪಿ 2014, ಬೆಂಗಳೂರು, ದಿನಾಂಕ:07/06/2014)

## ಉದ್ದೇಶ

ಅಂಗವಿಕಲತೆಯ ಪ್ರಮಾಣವನ್ನು ಕಡಿಮೆ ಮಾಡಿಕೊಳ್ಳಲು ಅಥವಾ ನಿವಾರಿಸುವ ಸಲುವಾಗಿ ಶಸ್ತ್ರಚಿಕಿತ್ಸೆಗೆ ಒಳಗಾಗುವ ವಿಕಲಚೇತನ ವ್ಯಕ್ತಿಗೆ ಶಸ್ತ್ರಚಿಕಿತ್ಸೆ/ಔಷಧಿ/ವೈದ್ಯಕೀಯ ಪರೀಕ್ಷೆ/ಬೆಡ್‌ಚಾರ್ಜ್‌ಗಳ ವೆಚ್ಚವನ್ನು ಭರಿಸಲು ಗರಿಷ್ಠ ರೂ.1.00 ಲಕ್ಷಗಳವರೆಗೆ ಅನುದಾನವನ್ನು ಶಸ್ತ್ರಚಿಕಿತ್ಸೆಗೆ ಒಳಗಾದ ನಂತರ ವೈದ್ಯರ ಶಿಫಾರಸ್ಸಿನ ಮೇಲೆ ಮರುಪಾವತಿಸಲಾಗುವುದು. ಈ ಸೌಲಭ್ಯವನ್ನು ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆ, ಸುಸಜ್ಜಿತ ಖಾಸಗಿ ಆಸ್ಪತ್ರೆಗಳ ಅಥವಾ ಸಂಜಯಗಾಂಧಿ ಆಸ್ಪತ್ರೆ, ಬೆಂಗಳೂರು ಮುಖಾಂತರ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯು ದಿನಾಂಕ:01–04–2000ದಿಂದ ಜಾರಿಯಲ್ಲಿರುತ್ತದೆ.

## ಅರ್ಹತೆ/ಷರತ್ತು/ನಿಯಮಗಳು

- ಶಸ್ತ್ರ ಚಿಕಿತ್ಸೆಯಿಂದ ಅಂಗವಿಕಲತೆ ನಿವಾರಣೆಯಾಗುವ ಇಲ್ಲವೆ ಅಂಗವಿಕಲತೆಯ ಪ್ರಮಾಣ ಕಡಿಮೆಯಾಗುವ ಕುರಿತಂತೆ ತಜ್ಞ ವೈದ್ಯಾಧಿಕಾರಿಗಳಿಂದ ಪಡೆದ ದೃಢೀಕರಣ ಒದಗಿಸಬೇಕು.

- ಮರುಪಾವತಿ ಪಡೆಯಲು, ಚಿಕಿತ್ಸೆಗೆ ಸಂಬಂಧಪಟ್ಟ ಔಷಧಿ ಖರೀದಿ, ಹಾಸಿಗೆ ಖರ್ಚು, ವೈದ್ಯಕೀಯ ಪರೀಕ್ಷೆಗಳ ವೆಚ್ಚ ಮತ್ತು ಶಸ್ತ್ರಚಿಕಿತ್ಸೆಗೆ ತಗಲುವ ವೆಚ್ಚದ ಮೂಲ ರಸೀತಿಗಳನ್ನು ಒದಗಿಸಬೇಕು

## ಅನುದಾನ ಮಂಜೂರಾತಿ ವಿಧಾನ

ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಭರ್ತಿ ಮಾಡಿ, ಸಂಬಂಧಪಟ್ಟ ಆಸ್ಪತ್ರೆಯ ಮುಖ್ಯಸ್ಥರು ಶಸ್ತ್ರಚಿಕಿತ್ಸೆ ಕೈಗೊಂಡ ನಂತರ ತಗಲಿದ ವೆಚ್ಚ ದೃಢೀಕರಿಸಿ, ಮೂಲ ರಸೀದಿಯೊಂದಿಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ನಿಗದಿತ ನಮೂನೆಯಲ್ಲಿ ಕೋರಿಕೆ ಸಲ್ಲಿಸಿದಲ್ಲಿ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಂದ, ಸದರಿ ಪ್ರಸ್ತಾವನೆಯನ್ನು ಜಿಲ್ಲಾ ಪಂಚಾಯತ್‌ನ ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಜಿಲ್ಲಾಮಟ್ಟದ ಸಮಿತಿಯಲ್ಲಿ ಮಂಡಿಸಿ, ಅನುಮೋದನೆ ಪಡೆದು ಚಿಕಿತ್ಸೆ ನಡೆಸಿದ ಆಸ್ಪತ್ರೆಗೆ ನೇರವಾಗಿ ಸಂದಾಯ ಮಾಡಲಾಗುತ್ತದೆ.



ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು
ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ
ಬಾಗಲಕೋಟ